ಕರ್ನಾಟಕ ಸರ್ಕಾರ

ಸಂ:ಗ್ರಾಅಪ 70 ಗ್ರಾನೀಸ(2)2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:20.08.2013 21

## Addendum / ಹೆಚ್ಚೋಲೆ

ವಿಷಯ: 2012-13ನೇ ಸಾಲಿನ NRDWP ಯೋಜನೆಯಡಿ ಅನುಷ್ಠಾನಗೊಳಿಸಿ ಪ್ರಶ್ನಿತವಾಗಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ ಬಿಲ್ ಪಾವತಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/215/ಪಬವ/2013, ದಿ:**21.06.2013.**
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಪಂ, ಗುಲ್ಬರ್ಗಾ ರವರ ಪತ್ರ ಸಂಖ್ಯೆ: ಜಿಪಗು/ಆಡಳಿತ/ಸಿಬ್ಬಂದಿ-1/48/2013-14/687, ದಿ:**27.07.2013.**
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/70/ಗ್ರಾನೀಸ(2)2013, ದಿ:**19.08.2013.**

--

ಮೇಲೆ (3)ರಲ್ಲಿ ಓದಲಾದ ಆದೇಶದ 4ರ ಕಂಡಿಕೆ ನಂತರ 4 'ಅ' 'ಆ' 'ಇ'ನಲ್ಲಿ ಕೆಳಕಂಡ ಅಂಶವನ್ನು ಅಳವಡಿಸಿಕೊಂಡು ಅದರನ್ವಯ ಎರಡೂ ತನಿಖಾ ತಂಡಗಳು ಕಾರ್ಯೋನ್ಮುಖರಾಗಬೇಕೆಂದು ಆದೇಶಿಸಿದೆ.

4 'ಅ' ಪ್ರಶ್ನಿತ ವಿಚಾರಣೆ ವ್ಯಾಪ್ತಿಯ ಬಿಲ್ ಪಾವತಿಯಲ್ಲಿ ಅಧೀಕೃತ ಗುತ್ತಿಗೆದಾರರಿಗೆ ಪಾವತಿಯಾಗಿರುವ ಹಣ ಮತ್ತು ಅನಧೀಕೃತ ಗುತ್ತಿಗೆದಾರರಿಗೆ ಹಾಗೂ ಬೋಗಸ್ ಬಿಲ್‌ಗಳ ಮೇಲೆ ಯಾವ ಕಾಮಗಾರಿಗೆ ಸಂಬಂಧಿಸಿದಂತೆ ಎಷ್ಟು ಹಣ ಪಾವತಿಸಲಾಗಿದೆಯೆಂದು ಪತ್ತೆ ಮಾಡಿ ವರದಿ ಮಾಡಬೇಕು.

'ಆ' ತನಿಖೆ ವೇಳೆ ಗುರುತಿಸಲಾಗುವ ಅವ್ಯವಹಾರ, ಅಧಿಕಾರ ದುರುಪಯೋಗ ಹಾಗೂ ಇತರೆ ಲೋಪ ದೋಷಗಳನ್ನು ಕುರಿತು ನಿರ್ದಿಷ್ಟವಾದ ಆರೋಪ ಪಟ್ಟಿಯನ್ನು ಕರ್ನಾಟಕ ವರ್ಗೀಕರಣ, ನಡತೆ ಮತ್ತು ಅಫೀಲು (CCA) ನಿಯಮಗಳು 1957ರ ಅನ್ವಯ ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಬೇಕು.

'ಇ' ಈ ತನಿಖೆಯ ಭೌತಿಕ ಪರಿಶೀಲನಾ ವಿವರಗಳನ್ನು ಗುಲ್ಬರ್ಗಾ ಜಿಲ್ಲಾ ಪಂಚಾಯತ್ ಮುಖೇನ ಸರ್ಕಾರಕ್ಕೆ ಕಳುಹಿಸಬೇಕು. ಜಿಲ್ಲಾಧಿಕಾರಿ, ಗುಲ್ಬರ್ಗಾರವರು ಈ ಎರಡೂ ತನಿಖಾ ತಂಡಗಳ ಉಸ್ತುವಾರಿ ಮಾಡಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ) 21/8/13
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಇಮೇಲ್:rk3452000@yahoo.co.in
ಫೋನ್:22032806, ಫ್ಯಾಕ್ಸ್:22203175

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬೆಂಗಳೂರು.
8. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾಮಂಡಳಿ, ಸಂಕೀರ್ಣ ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.